sdmimd

**ANDOLANA**

Date: July 26, 2014 Page: 4

Edition: Mysore Language: English

# ಎಸ್‌ಡಿಎಂ–ಐಎಂಡಿ ಸಂಸ್ಥಾಪನಾ ದಿನ

ಮೈಸೂರು,ಜು.೨೫–ಸೃಜನಾತ್ಮಕವಾಗಿ ಯಾವುದೇ ಕೆಲಸ ಮಾಡಿದರೂ ಅದರ ಫಲಿತಾಂಶ ಉನ್ನತ ಮಟ್ಟದಿಂದ ಕೂಡಿರುತ್ತದೆ ಎಂದು ಐಟಿಸಿ ಕಂಪನಿ ಸಾಂಸ್ಥಿಕ ನಿರ್ವಹಣೆ ಸಮಿತಿ ಸದಸ್ಯ ಶಿವಕುಮಾರ್ ಹೇಳಿದರು.

ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಇನ್‌ಸ್ಟಿಟ್ಯೂಟ್ ಫಾರ್ ಮ್ಯಾನೇಜ್‌ಮೆಂಟ್ ಡೆವಲಪ್‌ಮೆಂಟ್ (ಎಸ್‌ಡಿಎಂ–ಐಎಂಡಿ) ಸಂಸ್ಥೆಯ ವಾರ್ಷಿಕೋತ್ಸವದ ಅಂಗವಾಗಿ ಸಂಸ್ಥೆಯ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಸಂಸ್ಥಾಪನಾ ದಿನದ ವಿಶೇಷ ಭಾಷಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸೃಜನಾತ್ಮಕತೆಯನ್ನು ನಮ್ಮ ದೈನಂದಿನ ಎಲ್ಲಾ ಚಟುವಟಿಕೆಗಳಲ್ಲಿ ಅಳವಡಿಸಿಕೊಳ್ಳುವುದನ್ನು ರೂಢಿಸಿಕೊಂಡರೆ, ಆ ಕೆಲಸವೂ ಅಚ್ಚುಕಟ್ಟುತನದಿಂದ ಮೂಡಿಬರುತ್ತದೆ. ಅದರಲ್ಲೂ ವ್ಯಾಪಾರ ವಾಣಿಜ್ಯ ಯೋಜನೆಗಳನ್ನು ರೂಪಿಸುವಾಗ ಸೃಜನಶೀಲತೆ ಮುಖ್ಯ ಪಾತ್ರ ವಹಿಸುತ್ತದೆ ಎಂದು ಹೇಳಿದರು.

ಎಸ್‌ಡಿಎಂ–ಐಎಂಡಿ ನಿರ್ದೇಶಕ ಡಾ.ಎನ್.ಆರ್.ಪರಶುರಾಮನ್, ಉಪನಿರ್ದೇಶಕಿ ಡಾ.ಹೆಚ್.ಗಾಯತ್ರಿ, ಪ್ರಾಧ್ಯಾಪಕ ಡಾ.ಎಂ.ಆರ್.ಸುರೇಶ್ ಮತ್ತಿತರರು ಹಾಜರಿದ್ದರು.



ಮೈಸೂರಿನ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಇನ್‌ಸ್ಟಿಟ್ಯೂಟ್ ಫಾರ್ ಮ್ಯಾನೇಜ್‌ಮೆಂಟ್ ಡೆವಲಪ್‌ಮೆಂಟ್ (ಎಸ್‌ಡಿಎಂ-ಐಎಂಡಿ) ಸಂಸ್ಥೆಯ ವಾರ್ಷಿಕೋತ್ಸವದ ಅಂಗವಾಗಿ ಸಂಸ್ಥೆಯ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಸಂಸ್ಥಾಪನಾ ದಿನದ ವಿಶೇಷ ಭಾಷಣ ಕಾರ್ಯಕ್ರಮದಲ್ಲಿ ಸಂಸ್ಥೆ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.